**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ.ಕೆ. ಹರಿಪ್ರಸಾದ್ ಅವರು ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿರುವ ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ತೀವ್ರತರ ಅಪೌಷ್ಠಿಕತೆಯಿಂದ ಬಳಲುತ್ತಿರುವ ಬಗ್ಗೆ ನಿಯಮ 72 ಅಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:**

ಕೇಂದ್ರ ಸರ್ಕಾರವು 2021-22ನೇ ಸಾಲಿನಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ನೊಂದಣಿಯಾಗುವ ಫಲಾನುಭವಿಗಳ ಮಾಹಿತಿಯನ್ನು ತ್ವರಿತವಾಗಿ ಮೇಲ್ವಿಚಾರಣೆ ಮಾಡಲು ಪೋಷಣ್ ಟ್ರ್ಯಾಕರ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಿರುತ್ತದೆ. ಸದರಿ ತಂತ್ರಾಂಶದ ಅಂಕಿ-ಅಂಶಗಳ ಅನ್ವಯ 02 ವರ್ಷಗಳಲ್ಲಿ ದಾಖಲಾಗಿರುವ ಮತ್ತು ಪೌಷ್ಠಿಕಾಂಶಗಳ ಮಟ್ಟ ಗುರುತಿಸಲಾದ (Nutritional Status) ಮಕ್ಕಳ ವಿವರ ಈ ಕೆಳಕಂಡಂತಿದೆ:

| ವಿವರ | 2023-24 ಮಾರ್ಚ್-24ರ ಅಂತ್ಯಕ್ಕೆ | | 2024-25 ನವೆಂಬರ್-24ರ ಅಂತ್ಯಕ್ಕೆ | |
|---|---|---|---|---|
| | ಸಂಖ್ಯೆ | (%) | ಸಂಖ್ಯೆ | (%) |
| **ಒಟ್ಟು ದಾಖಲಾದ ಮಕ್ಕಳು** | **3238685** | | **3291724** | |
| ಅಳತೆ ಮಾಡಲಾದ ಮಕ್ಕಳ ಸಂಖ್ಯೆ | 2773247 | **85.63** | 3246370 | **98.62** |
| ಸಾಧಾರಣ ಅಪೌಷ್ಠಿಕ ಮಕ್ಕಳು | 146749 | **5.29** | 91801 | **2.83** |
| ತೀವ್ರ ಅಪೌಷ್ಠಿಕ ಮಕ್ಕಳು | 73300 | **2.64** | 11674 | **0.36** |

ರಾಜ್ಯದಲ್ಲಿ ಪೋಷಣ್ ಟ್ರ್ಯಾಕರ್‌ನಲ್ಲಿ 2023-24ನೇ ಸಾಲಿನಲ್ಲಿ ಸಾಧಾರಣ ಅಪೌಷ್ಠಿಕ ಮಕ್ಕಳು ಶೇ.5.29 ಹಾಗೂ ತೀವ್ರ ಅಪೌಷ್ಠಿಕ ಮಕ್ಕಳು ಶೇ.2.64 ರಷ್ಟು ಗುರುತಿಸಲಾಗಿರುತ್ತದೆ. 2024-25ನೇ ಸಾಲಿನಲ್ಲಿ ನವೆಂಬರ್-24ರ ಅಂತ್ಯಕ್ಕೆ ಸಾಧಾರಣ ಅಪೌಷ್ಠಿಕ ಮಕ್ಕಳು ಶೇ.2.83 ಹಾಗೂ ತೀವ್ರ ಅಪೌಷ್ಠಿಕ ಮಕ್ಕಳು ಶೇ.0.36 ರಷ್ಟು ಗುರುತಿಸಲಾಗಿರುತ್ತದೆ. ರಾಜ್ಯದಲ್ಲಿ NFHS-5 ಸರ್ವೆ ಸೂಚಕಗಳಿಗಿಂತ ಪೋಷಣ್ ಟ್ರ್ಯಾಕರ್ ಪ್ರಕಾರ ಸಾಧಾರಣ ಅಪೌಷ್ಠಿಕ ಮಕ್ಕಳು ಹಾಗೂ ತೀವ್ರ ಅಪೌಷ್ಠಿಕ ಮಕ್ಕಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿರುವುದು ಕಂಡುಬಂದಿರುತ್ತದೆ.

**ಮಕ್ಕಳ ಅಪೌಷ್ಠಿಕತೆ ನಿವಾರಣೆಗೆ ಸರ್ಕಾರದ ವತಿಯಿಂದ ಕೈಗೊಂಡ ಕ್ರಮಗಳು ಕೆಳಕಂಡಂತಿವೆ:**

**<u>1. ಪೂರಕ ಪೌಷ್ಠಿಕ ಆಹಾರ :</u>**

**(ಎ) ಮಾತೃಪೂರ್ಣ ಯೋಜನೆ :** ಮಾತೃಪೂರ್ಣ ಯೋಜನೆಯನ್ನು 2017 ಅಕ್ಟೋಬರ್ 2ನೇ ತಾರೀಖಿನಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಠಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವನ್ನು ಅಂಗನವಾಡಿ ಕೇಂದ್ರದಲ್ಲಿಯೇ ನೀಡಲಾಗುತ್ತಿದೆ.

ಕೇಂದ್ರ ಸರ್ಕಾರದ ರೂ.4.75 ರ ಅನುದಾನದೊಂದಿಗೆ ರೂ.16.25 ರ ರಾಜ್ಯ ಸರ್ಕಾರದ ಹೆಚ್ಚುವರಿ ಅನುದಾನ ಸೇರಿ ಒಟ್ಟು ರೂ. 21.00 ರ ಘಟಕ ವೆಚ್ಚದಲ್ಲಿ ಗರ್ಭಿಣಿ, ಬಾಣಂತಿಯರಲ್ಲಿ ಅಪೌಷ್ಠಿಕತೆ ಮತ್ತು ರಕ್ತಹೀನತೆ ತಡೆಯಲು ಅನುವಾಗುವಂತೆ ಬಿಸಿಯೂಟವನ್ನು ಸಿದ್ಧಪಡಿಸಿ ಅಂಗನವಾಡಿ ಕೇಂದ್ರದಲ್ಲಿಯೇ ವಿತರಣೆ ಮಾಡಲಾಗುತ್ತಿದೆ.

ಮುಂದುವರೆದು, ಪ್ರಸಕ್ತ ಸಾಲಿನಲ್ಲಿ ಫಲಾನುಭವಿಗಳ ಇಚ್ಛೆಗನುಸಾರವಾಗಿ ಅಗತ್ಯವಿರುವ ಕಚ್ಚಾ ಆಹಾರ ಸಾಮಗ್ರಿಗಳನ್ನು ಮನೆಗೆ (THR) ವಿತರಿಸಲಾಗುತ್ತಿದೆ ಅಥವಾ ಅಂಗನವಾಡಿ ಕೇಂದ್ರದಲ್ಲಿಯೇ ಪೌಷ್ಠಿಕಯುಕ್ತ ಬಿಸಿಯೂಟವನ್ನು ಸ್ವೀಕರಿಸಬಹುದಾಗಿದೆ.

**(ಬಿ) ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರ :** ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ 6 ತಿಂಗಳಿಂದ 6 ವರ್ಷದ ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 300 ದಿನಗಳ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.

- ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿದಿನ ರೂ.8.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.
- ತೀವ್ರ ಅಪೌಷ್ಠಿಕ ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.
- ಅಂಗನವಾಡಿಗೆ ಹಾಜರಾಗುವ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ.
- ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ **6** ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 5 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ.
- 6 ತಿಂಗಳಿಂದ 3 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 20 ಗ್ರಾಂ. ಹಾಲಿನ ಪುಡಿಯನ್ನು ಮನೆಗೆ ವಿತರಿಸಲಾಗುತ್ತಿದೆ.
- 3 ವರ್ಷದಿಂದ 6 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 20 ಗ್ರಾಂ. ಹಾಲಿನ ಪುಡಿಯನ್ನು ಮನೆಗೆ ವಿತರಿಸಲಾಗುತ್ತಿದೆ.
- ತೀವ್ರ ಅಪೌಷ್ಠಿಕ ಮಕ್ಕಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪೌಷ್ಠಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.
- ಆರೋಗ್ಯ ಮತ್ತು ಪೌಷ್ಠಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಠಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಠಿಕತೆಯುಳ್ಳ ಆಹಾರವನ್ನು ನೀಡಲು ಅರಿವು ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ ಹಾಗೂ ಪೋಷಣ್ ಮಾಸಾಚರಣೆ ಕಾರ್ಯಕ್ರಮದ ಮೂಲಕ ಸಹ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ವಿಶೇಷ ಪೌಷ್ಠಿಕ ಆಹಾರದ ಕುರಿತು ಅರಿವು ಶಿಬಿರಗಳನ್ನು ಆಯೋಜಿಸಲಾಗುತ್ತಿದೆ.

**2. ಜುಚ್ಚುಮದ್ದು ಕಾರ್ಯಕ್ರಮ:**

6 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಿಗದಿತ ಚುಚ್ಚುಮದ್ದನ್ನು ನೀಡಲಾಗುತ್ತಿದೆ.

**3. ಆರೋಗ್ಯ ತಪಾಸಣೆ:**

ಅಂಗನವಾಡಿ ಕೇಂದ್ರದಲ್ಲಿ ದಾಖಲಾಗಿರುವ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು ನಿಯಮಿತವಾಗಿ 3 ತಿಂಗಳಿಗೊಮ್ಮೆ (RBSK ಮತ್ತು ವೈದ್ಯಕೀಯ ಅಧಿಕಾರಿಗಳಿಂದ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ.

**4.ಮಾಹಿತಿ ಸೇವೆ:**

ಅಂಗನವಾಡಿ ಕೇಂದ್ರಗಳಿಗೆ ವೈದ್ಯಾಧಿಕಾರಿಗಳು ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ಮಾಡಿದಾಗ ಹೆಚ್ಚಿನ ತಪಾಸಣೆಗೆ ಅಥವಾ ಚಿಕಿತ್ಸೆಗೆ ತಾಲ್ಲೂಕು ಆರೋಗ್ಯ ಕೇಂದ್ರ / ಜಿಲ್ಲಾ ಆರೋಗ್ಯ ಕೇಂದ್ರಕ್ಕೆ / ಪೌಷ್ಠಿಕ ಪುನರ್ವಸತಿ ಕೇಂದ್ರಗಳಿಗೆ ಕಳುಹಿಸಲು ಸೂಚಿಸುತ್ತಾರೆ. ವೈದ್ಯರು ಸೂಚಿಸಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹೆಚ್ಚಿನ ಚಿಕಿತ್ಸೆ, ತಪಾಸಣೆಗೆ ಮಕ್ಕಳನ್ನು ಕಳುಹಿಸಿಕೊಡುತ್ತಾರೆ.

**ಸಂಖ್ಯೆ:** ಮಮಇ 340 ಐಸಿಡಿ 2024

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.